ಗ್ರಾಮ ಪಂಚಾಯತ್‌ಗಳಿಗೆ ಅನುದಾನ

1502(960), ಶ್ರೀ ಮೊಹೀಯುದ್ದೀನ್ ಬಾವಾ ಬಿ.ಎ.(ಮಂಗಳೂರು ನಗರ ಉತ್ತರ)

ಅ) ಗ್ರಾಮ ಪಂಚಾಯತ್‌ಗಳಿಗೆ 4ನೇ ಕಂತಿನ ಅನುದಾನ ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸರ್ಕಾರವು ಸದರಿ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಿದೆ?

ಶ್ರೀ ಹೆಚ್.ಕೆ.ಪಾಟೀಲ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ಬಂದಿದೆ.

ಆ) 2013–14ನೇ ಸಾಲಿನ ಶಾಸನಬದ್ಧ ಅನುದಾನದ 4ನೇ ತ್ರೈಮಾಸಿಕ ಕಂತಿನ ಅನುದಾನ ಬಿಡುಗಡೆ ಮಾಡಲು ಗ್ರಾಮ ಪಂಚಾಯತಿಗಳು 2013–14ನೇ ಸಾಲಿನ ತೆರಿಗೆ ವಾರ್ಷಿಕ ಬೇಡಿಕೆಯಲ್ಲಿ ಶೇಕಡಾ 50 ರಷ್ಟನ್ನು ವಸೂಲಿ ಮಾಡಿದ್ದಲ್ಲಿ ಅನುದಾನ ಬಿಡುಗಡೆ ಮಾಡುವುದಾಗಿ ಷರತ್ತನ್ನು ವಿಧಿಸಲಾಗಿತ್ತು. ಪ್ರಸ್ತುತ ಈ ಬಗ್ಗೆ ಗ್ರಾಮ ಪಂಚಾಯತಿಗಳಿಂದ ವಿವರವನ್ನು ಪಡೆಯಲಾಗಿದ್ದು, ಶೀಘ್ರವಾಗಿ ಅನುದಾನ ಬಿಡುಗಡೆ ಮಾಡಲು ಕ್ರಮ ವಹಿಸಲಾಗುವುದು.

R.T.E. ಕಾಯ್ದೆಯಡಿಯಲ್ಲಿ ಆಯ್ಕೆಯಾಗಿರುವ ವಿದ್ಯಾರ್ಥಿಗಳು

1503(417), ಶ್ರೀ ಮುನಿರಾಜು. ಎಸ್ (ದಾಸರಹಳ್ಳಿ)

ಅ) ರಾಜ್ಯದಲ್ಲಿ ಶಿಕ್ಷಣ ಹಕ್ಕು ಕಾಯಿದೆಯಡಿ ಆಯ್ಕೆಯಾಗಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು?